## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1127 (1350) |
| ಸದಸ್ಯರ ಹೆಸರು | : | ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 18.03.2020 |
| ಉತ್ತರಿಸುವ ಸಚಿವರು | : | ಕಂದಾಯ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಎಷ್ಟು ಭೂನ್ಯಾಯಮಂಡಳಿಯಲ್ಲಿ ಕೇಸುಗಳು ಇತ್ಯರ್ಥಕ್ಕಾಗಿ ಬಾಕಿ ಇವೆ; ತ್ವರಿತದ ಇತ್ಯರ್ಥಕ್ಕಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ರಾಜ್ಯದ ತಾಲ್ಲೂಕು ಭೂನ್ಯಾಯ ಮಂಡಳಿಗಳಲ್ಲಿ ಒಟ್ಟು 4878 ಪ್ರಕರಣಗಳು ಇತ್ಯರ್ಥಕ್ಕೆ ಬಾಕಿ ಇರುತ್ತವೆ.<br>ರಾಜ್ಯದ ತಾಲ್ಲೂಕು ಭೂನ್ಯಾಯ ಮಂಡಳಿಗಳಲ್ಲಿನ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸುವಂತೆ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. |
| (ಆ) | ಭೂನ್ಯಾಯ ಮಂಡಳಿಯ ಸದಸ್ಯರುಗಳನ್ನು ನೇಮಕ ಮಾಡಲಾಗಿದೆಯೇ; (ವಿವರ ನೀಡುವುದು) | ನೂತನ ಸರ್ಕಾರ ರಚನೆಯಾದ ನಂತರ ರಾಜ್ಯದಲ್ಲಿ ಈಗಾಗಲೇ 158 ತಾಲ್ಲೂಕು ಭೂನ್ಯಾಯ ಮಂಡಳಿಗಳಿಗೆ ಸರ್ಕಾರದಿಂದ ಅಧಿಕಾರೇತರ ಸದಸ್ಯರನ್ನು ನಾಮನಿರ್ದೇಶನ ಮಾಡಿ ಅಧಿಸೂಚನೆ ಹೊರಡಿಸಲಾಗಿದೆ. ಬಾಕಿ ತಾಲ್ಲೂಕು ಭೂನ್ಯಾಯ ಮಂಡಳಿಗಳ ರಚನೆಗೆ ತುರ್ತು ಪ್ರಸ್ತಾವನೆ ಸಲ್ಲಿಸುವಂತೆ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. |
| (ಇ) | ದಕ್ಷಿಣ ಕನ್ನಡ ಜಿಲ್ಲೆಯ ಯಾವ ಯಾವ ತಾಲ್ಲೂಕಿನಲ್ಲಿ ಭೂನ್ಯಾಯ ಮಂಡಳಿಯಲ್ಲಿ ಎಷ್ಟು ಪ್ರಕರಣಗಳು ಬಾಕಿ ಇವೆ; ಯಾವ ಹಂತದಲ್ಲಿ ಇವೆ; ತ್ವರಿತ ಇತ್ಯರ್ಥಕ್ಕೆ ಸರ್ಕಾರ ಕೈಗೊಂಡಿರುವ. ಕ್ರಮವೇನು; (ವಿವರ ನೀಡುವುದು) | (see table below) |

| ಜಿಲ್ಲೆಯ ಹೆಸರು | ತಾಲ್ಲೂಕಿನ ಹೆಸರು | ಭೂನ್ಯಾಯ ಮಂಡಳಿಯಲ್ಲಿ ಇತ್ಯರ್ಥಕ್ಕೆ ಬಾಕಿ ಇರುವ ಪ್ರಕರಣಗಳ ಸಂಖ್ಯೆ |
|---|---|---|
| ದಕ್ಷಿಣ ಕನ್ನಡ | ಮಂಗಳೂರು | 336 |
| | ಮೂಡಬಿದಿರೆ | 30 |
| | ಬಂಟ್ವಾಳ | 120 |
| | ಬೆಳ್ತಂಗಡಿ | 54 |
| | ಪುತ್ತೂರು | 57 |
| | ಸುಳ್ಯ | 32 |
| | ಒಟ್ಟು:- | **629** |

ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ, ಮೂಡಬಿದಿರೆ, ಬಂಟ್ವಾಳ, ಪುತ್ತೂರು, ಸುಳ್ಯ ಮತ್ತು ಮಂಗಳೂರು ತಾಲ್ಲೂಕು ಭೂನ್ಯಾಯ ಮಂಡಳಿಗಳಿಗೆ ಸರ್ಕಾರದಿಂದ ಅಧಿಕಾರೇತರ ಸದಸ್ಯರನ್ನು ನಾಮನಿರ್ದೇಶನ ಮಾಡಿ ಅಧಿಸೂಚನೆ ಹೊರಡಿಸಲಾಗಿದ್ದು, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಿಂದ ಮರುವಿಚಾರಣೆಗೆ ಹಿಂದಿರುಗಿಸಲ್ಪಟ್ಟ ಸದರಿ 629 ಪ್ರಕರಣಗಳು ವಿಚಾರಣೆ ಹಂತದಲ್ಲಿರುತ್ತವೆ.

...2

| | | |
|---|---|---|
| (ಈ) | ರಾಜ್ಯದಲ್ಲಿ ಈ ಪ್ರಕರಣಗಳನ್ನು ಇತ್ಯರ್ಥ ಪಡಿಸಲು ವಿಶೇಷ ಟ್ರಿಬಿನೆಲ್‌ಗಳನ್ನು ರಚಿಸಲು ಸರ್ಕಾರದ ಮುಂದೆ ಯೋಜನೆ ಇದೆಯೇ? (ವಿವರ ನೀಡುವುದು) | ಇಲ್ಲ |

ಸಂಖ್ಯೆ: ಕಂಇ 7 ಎಲ್‌ಆರ್‌ಎಸ್ 2020

(ಆರ್. ಅಶೋಕ)
ಮಾನ್ಯ ಕಂದಾಯ ಸಚಿವರು